# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 21-05-2022 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ),
4. ಶ್ರೀ.ಮಹಾಂತೇಶ್ ಉಜ್ಜನಿಕೊಪ್ಪ ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.
6. ಶ್ರೀ.ವಿನಯ್ ಕುಮಾರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೊಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ -01ರಲ್ಲಿನ ರೈತರ ಸಂತೆ, ಸುರಭಿ ಬಡಾವಣೆ ಮುಖ್ಯರಸ್ತೆ, ಬಿ.ಬಿ.ರಸ್ತೆ, ಡೌನ್ ಬಜಾರ್ ರಸ್ತೆಗಳಲ್ಲಿ ಮಾನ್ಯ ಮುಖ್ಯ ಆಯುಕ್ತರು ಪ್ರತಿ ದಿನ ಈ ರಸ್ತೆಗಳಲ್ಲಿ ಸಂಚಾರ ಮಾಡುವುದರಿಂದ ಈ ರಸ್ತೆಗಳಲ್ಲಿ ಪಾಟ್ ಹೊಲ್ ಬೀಳದಂತೆ, ಹಾಗೂ ಸ್ವಚ್ಛತೆ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸಭೆಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೊಡೆಲ್ ಅಧಿಕಾರಿಗಳು ಸೂಚಿಸಿದರು.

2. ಕೆಂಪೇಗೌಡ ವಾರ್ಡ್ ನಂ -01ರಲ್ಲಿನ ದಿನಾಂಕ: 18-5-2022 ರಂದು ಯಲಹಂಕ ಗ್ರಾಮದಲ್ಲಿ ಕರಗ ಮಹೋತ್ಸವ ಕಾರ್ಯಕ್ರಮ ನಡೆದಿದ್ದು, ವಾರ್ಡ್ ನಂ-01ರ ಪ್ರದೇಶಗಳಲ್ಲಿನ ಮುಖ್ಯ ಮತ್ತು ಅಡ್ಡರಸ್ತೆಗಳಲ್ಲಿ ಸ್ವಚ್ಛತೆ ಕಾರ್ಯ ಕೈಗೊಳ್ಳುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೊಡೆಲ್ ಅಧಿಕಾರಿಗಳು ಸೂಚಿಸಿ~~ದರು~~ರುವಂತೆ. ಕಾರ್ಯ ನಿರ್ವಹಿಸಲಾಯಿತು.

3. ಕೆಂಪೇಗೌಡ ವಾರ್ಡ್ ವಾರ್ಡ್ ನಂ-01ರ ಸರ್ಕಾರಿ ಆಸ್ಪತ್ರೆ ರಸ್ತೆ, ಬಿ.ಬಿ.ರಸ್ತೆ, ಮತ್ತು ಮುಖ್ಯರಸ್ತೆಗಳಲ್ಲಿ ಕರಗಕ್ಕೆ ಸಂಬಂದಿಸಿದ ಬ್ಯಾನರ್‌ಗಳನ್ನು ತೆರವುಗೊಳಿಸಿರುವುದಾಗಿ ಸಭೆಯಲ್ಲಿ ವಾರ್ಡ್‌ನ ಅಭಿಯಂತರರು ನೊಡೆಲ್ ಅಧಿಕಾರಿಗಳಿಗೆ ತಿಳಿಸಿದರು.

4. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಪ್ರದೇಶಗಳಲ್ಲಿ ಡೆಂಗ್ಯೂ, ಚಿಕನ್ ಗುನ್ಯಾ, ಕಾಲರ ಮತ್ತು ಮಲೇರಿಯಾ ರೋಗಗಳನ್ನು ತಡೆಗಟ್ಟುವಂತೆ ಮುಂಜಾಗೃತ ಕ್ರಮಗಳನ್ನು ಕೈಗೊಳ್ಳುವಂತೆ ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮಾಡುತ್ತಿರುವುದಾಗಿ ಸಭೆಯಲ್ಲಿ ಡಾ.ಮಂಜುಳ ರವರು ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರು ಸಭೆಗೆ ತಿಳಿಸಿದರು.

5. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ತುಂಬಾ ಶಿಥಿಲಗೊಂಡಿರುವ ಮನೆಗಳನ್ನು ಸರ್ವೇ ಮಾಡಲಾಗಿದ್ದು, ಈಗಾಗಲೇ ಬಿದ್ದು ಹೋಗುವ ಮನೆಗಳಿಗೆ ನೊಟಿಸ್ ಜಾರಿ ಮಾಡಿ ಮನೆಗಳನ್ನು ತೆರವುಗೊಳಿಸಲು ಸೂಚಿಸಲಾಗಿರುತ್ತದೆ. ಸದರಿ ಮಾಲೀಕರುಗಳಿಗೆ ಮತ್ತೊಮ್ಮೆ ಶಿಥೀಲಗೊಂಡಿರುವ ಮನೆಗಳಲ್ಲಿ ವಾಸ ಮಾಡಬಾರದೆಂದು ತಿಳಿಸುವಂತೆ ಸಭೆಯಲ್ಲಿ ವಾರ್ಡ್ ನ ಅಭಿಯಂತರರು ಸಂಪರ್ಕ ಕಾರ್ಯಕರ್ತೆಯವರಿಗೆ ಸೂಚಿಸಿದರು.

6. ಕೋಗಿಲು ವೃತ್ತದ ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ತೆಗೆದು ಮಳೆನೀರು ಸರಾಗವಾಗಿ ಹರಿಯುವಂತೆ ಮಾಡಲು ಸಂಬಂಧಿಸಿದ ವಾರ್ಡ್‌ನ ಅಭಿಯಂತರರಿಗೆ ನೊಡೆಲ್ ಅಧಿಕಾರಿಗಳು ಸೂಚಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೊಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ ನೊಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.